# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 642 (713)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ವಿಷಯ : ಮೂಲಭೂತ ಸೌಕರ್ಯಗಳ ಯೋಜನೆಗಳ ಅನುಷ್ಠಾನದ ಬಗ್ಗೆ

(ಅ) ರಾಜ್ಯದಲ್ಲಿ ಕೈಗೊಂಡಿರುವ ಮೂಲಭೂತ ಸೌಕರ್ಯಗಳ ಯೋಜನೆಗಳ ಅನುಷ್ಠಾನಗಳಲ್ಲಿ ಅಗತ್ಯವಿರುವ ಕಾರ್ಯಸಾಧ್ಯತೆ ಅಂತರ ನಿಧಿ (Viability Gap Fund) ಯನ್ನು ತೊಡಗಿಸಲು ಕೇಂದ್ರ ಸರ್ಕಾರ ರೂ. 8 ಸಾವಿರ ಕೋಟಿಗಳ ನಿಧಿಯನ್ನು ಸ್ಥಾಪಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ನಿಧಿಯಿಂದ ರಾಜ್ಯದಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವ ಉದ್ದೇಶದಿಂದ ಯಾವ ಯಾವ ಯೋಜನೆಗಳಿಗೆ ಅನುದಾನ ಪಡೆದಿದೆ ; (ವಿವರ ನೀಡುವುದು)

(ಇ) ಕೇಂದ್ರ ಸರ್ಕಾರ ಕೆಲವು ರಾಜ್ಯಗಳಲ್ಲಿ ಕೆಲವೊಂದು ಮೂಲಭೂತ ಸೌಕರ್ಯ ಕಲ್ಪಿಸುವ ಯೋಜನೆಗಳನ್ನು ಪ್ರಾಯೋಗಿಕ ಯೋಜನೆ (Pilot Project) ಗಳಾಗಿ ಕೈಗೆತ್ತಿಕೊಂಡಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ರಾಜ್ಯದಲ್ಲಿ ಕೈಗೊಂಡಿರುವ ಪ್ರಾಯೋಗಿಕ ಯೋಜನೆಗಳಾವುವು ; (ವಿವರ ನೀಡುವುದು)

(ಉ) ಕೇಂದ್ರ ಸರ್ಕಾರ ಈ ಕಾರ್ಯಸಾಧ್ಯತೆ ಅಂತರ ನಿಧಿ (Viability Gap Fund) ಯೋಜನೆಯನ್ನು 2025ನೇ ಇಸವಿಯವರೆಗೆ ವಿಸ್ತರಿಸಿರುವುದು ನಿಜವೇ ?